ಫಾರೆಸ್ಟ್ ಇಲಾಖಾ.

ಸಂದಲ್ ಹರಾಜ್ ನೋಟಿಫಿಕೇಷನ್.

ತಾರೀಖು 21ನೆ ಆಗಸ್ಟು 1909.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ—

ಮೈಸೂರು ಸರಕಾರದ ಶ್ರೀಗಂಧದ ಸಾಲೇವಾನ ನಡಿಯತೆಕ್ಕ ಹರಾಜು ಈ ಕೆಳಗೆ ನಮೂದಿಸಿರುವ ಕೋಠಿಗಳಲ್ಲಿ ಅದರ ದರ ಬಾಜೂದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಡೆಪ್ಯುಟಿ ಕಮಿಷನರು ಅಥವಾ ಅವರಿಂದ ನೇಮಿಸಲ್ಪಡುವ ಇತರ ಆಫಿಸರು ಮತ್ತು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರುಗಳಿಂದ ನಡಿಸಲ್ಪಡುವದು.

ನಂ.	ಡಿಸ್ಟ್ರಿಕ್ಟ್.	ಕೋಠಿ.	ಹರಾಜು ತಾರೀಖು.	ಹರಾಜಿಗೆ ಇಡಲ್ಪಡುವ ಸ್ಯಾಂಡಲ್ ಮರಗಳು.	ಷರಾ.
1	ಶಿವಮೊಗ್ಗ ...	ತೀರ್ಥಹಳ್ಳಿ ...	1909ನೆ ಇಸವಿ ನವಂಬರ್ ತಾರೀಖು 18	200	
2	ಡಿಟೋ ...	ಸಾಗರ ...	ಡಿಟೋ 22	100	
3	ಡಿಟೋ ...	ಶಿವಮೊಗ್ಗ ...	ಡಿಟೋ 25	500	
4	ಕಡೂರು ...	ತರೀಕೆರೆ ...	ಡಿಟೋ 29	(a)200	(a) ಚಿತ್ರದುರ್ಗದ 10 ಟ್ಯಗಳು ಶೇರಿರುತ್ತೆ.
5	ಡಿಟೋ	ಚಿಕ್ಕಮಗಳೂರು ...	1909ನೆ ಡಿಸೆಂಬರ್ ತಾರೀಖು 2	400	
6	ಹಾಸನ ...	ಹಾಸನ ...	ಡಿಟೋ 6	200	
7	ಬೆಂಗಳೂರು ...	ಬೆಂಗಳೂರು ...	ಡಿಟೋ 9	(b)100	(b) ತುಮಕೂರು 30 ಟ್ಯಗಳು ಕೋಲಾರದ 5 ಟ್ಯಗಳು ಶೇರಿರುತ್ತೆ.
8	ಮೈಸೂರು ...	ಶ್ರೀರಂಗಪಟ್ಟಣ ...	ಡಿಟೋ 13	250	
9	ಡಿಟೋ ...	ಹುಣಸೂರು ...	ಡಿಟೋ 16	450	
			ಜುಮ್ಲಾ ...	2,400	

ಎಂ. ಮುತ್ತಣ್ಣ, ಕ್ವಸರ್ವೇಟರ್ ಆಫ್ ಫಾರೆಸ್ಟ್ಸ್, ಇನ್ ಮೈಸೂರು.

ಬೆಂಗಳೂರು ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 24ನೆ ನವಂಬರ್ 1909.

1. ಕಂದಾಯದ ಬಾಕೀದಾರರಾದ ಜೋಡಿ ಕಂಸಂದ್ರದ ರಾಮಸ್ವಾಮಿ ಅಯ್ಯಂಗಾರ್ರಿಂದ ಬರಬೇಕಾದ ಜಮ್ಮಿ ಜೋಡಿ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಬೆಂಗಳೂರು ಡಿಸ್ಟ್ರಿಕ್ಟು ನೆಲಮಂಗಲ ತಾಲ್ಲೂಕು ಆಫೀಸಿನಲ್ಲಿ 1910ನೆ ಇಸವಿ ಜನವರಿ 7ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ. ಚಿಕದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1908—09ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪಶೀಲ್ ವೀರಿಗೆ ರೂಪಾಯಿ 115-6-2 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯುಟಿ ಕಮಿಷನರವರಿಂದಾಗಲಿ ಯಾ ಈ ಭಾಗದಲ್ಲಿ ಅಧಿಕಾರವನ್ನು ಹೊಂದಿದ ಇತರ ಅಧಿಕಾರಿಯಿಂದಾಗಲಿ ಮುಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿಮಾಡಿದ ಮೇಲೆ ಡೆಪ್ಯುಟಿ ಕಮಿಷನರವರಿಂದ ಹರಾಜು ಮುಂಜೂರ್ಮಾಡಲ್ಪಟ್ಟು ಕೂಡ್ಲೆ, ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪ